**1 ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ.ದಂಃ ರವರ ನ್ಯಾಯಾಲಯ, ಮೂಡಿಗೆರೆ**

**ಸಿ.ಸಿ.1506/2024**

| | | |
|---|---|---|
| ಸಾಕ್ಷಿದಾರರ ಹೆಸರು | : ಅಣ್ಣಪ್ಪ | ಪ್ರಾಸಾ-1 |
| ತಂದೆಯ ಹೆಸರು | : ಮೋಟಯ್ಯ | ಚಾಸಾ-1 |
| ವಯಸ್ಸು | : 60 ವರ್ಷ | ಪ್ರಮಾಣ ವಚನ ಬೋಧಿಸಲಾದ |
| ಉದ್ಯೋಗ | : ಕೂಲಿ | ದಿನಾಂಕಃ 06.01.2026. |
| ವಾಸಸ್ಥಳ | : ಬಿ.ಹೊಸಹಳ್ಳಿ | |

**:ಮುಖ್ಯ ವಿಚಾರಣೆ ಪ್ರಾಜ್ಞ್ಯಾ ಸ.ಸ.ಅ. ರವರಿಂದ:**

ನ್ಯಾಯಾಲಯದ ಮುಂದಿರುವ ಆರೋಪಿ ನನ್ನ ಅಳಿಯ. ಚಾಸಾ-5 ನನ್ನ ಹೆಂಡತಿ. ಚಾಸಾ-6 ನನ್ನ ಮಗಳು. ಚಾಸಾ-2 ರಿಂದ 4 ರವರ ಪರಿಚಯ ನನಗಿದೆ.

ಸಾಕ್ಷಿಯು ದಿ.01.04.2024 ರಂದು ನೀಡಿದ ದೂರಿನಲ್ಲಿ ತಮ್ಮ ಸಹಿಗಳನ್ನು ಗುರುತಿಸಿದ್ದು, ಸದರಿ ದೂರನ್ನು ನಿಪಿ-1 ಮತ್ತು ಸಾಕ್ಷಿಯು ಸಹಿಯನ್ನು ನಿಪಿ-1(ಎ) ಎಂದು ಗುರುತಿಸಲಾಯಿತು. ಸಾಕ್ಷಿಯು ದಿ.01.05.2024 ರಂದು ಬರೆದಂತಹ ಮಹಜರ್ ಪ್ರತಿ ಮತ್ತು ಅದರಲ್ಲಿರುವ ಸಹಿಯನ್ನು ನೋಡಿ ಗುರುತಿಸಿದ್ದು, ಸದರಿ ಮಹಜರ್ ಪ್ರತಿಯನ್ನು ನಿಪಿ-2 ಮತ್ತು ಸಾಕ್ಷಿಯು ಸಹಿಯನ್ನು ನಿಪಿ-2(ಎ) ಎಂದು ಗುರುತಿಸಲಾಯಿತು. ಸಾಕ್ಷಿಯು ಎರಡು ಫೋಟೋಗಳನ್ನು ತೋರಿಸಲಾಗಿ ಅದರಲ್ಲಿ ತಮ್ಮ ಇರುವಿಕೆಯ ಬಗ್ಗೆ ನೋಡಿ ಗುರುತಿಸಿದ್ದು, ಸದರಿ ಫೋಟೋವನ್ನು ನಿಪಿ-3 ಮತ್ತು 4 ಎಂದು ಗುರುತಿಸಲಾಯಿತು. ಸಾಕ್ಷಿಯು ನ್ಯಾಯಾಲಯದ ಮುಂದಿರುವ ಒಂದು ದೊಣ್ಣೆಯನ್ನು ತೋರಿಸಲಾಗಿ ಅದರಲ್ಲಿ ತಮ್ಮ ಸಹಿ ಇರುವುದನ್ನು ಗುರುತಿಸಿದ ಮೇರೆಗೆ ಸದರಿ ದೊಣ್ಣೆಯನ್ನು ಎಂ.ಒ.1 ಮತ್ತು ಸಾಕ್ಷಿಯು ಸಹಿಯನ್ನು ಎಂ.ಒ.1(ಎ) ಎಂದು ಗುರುತಿಸಲಾಯಿತು.

ನಿಪಿ-1 ರಲ್ಲಿ ಏನನ್ನು ಬರೆಯಲಾಗಿದೆ ಎಂದು ನನಗೆ ತಿಳಿದಿರುವುದಿಲ್ಲ. ನಿಪಿ-1 ರಲ್ಲಿ ಯಾವ ದಿನ ಯಾವ ವಿಷಯದ ಕುರಿತು ಸಹಿ ಮಾಡಿರುತ್ತೇನೆ ಎಂದು ನನಗ ತಿಳಿದಿರುವುದಿಲ್ಲ. ನಾನು ಹೊಲದಲ್ಲಿ ಕೂಲಿ ಕೆಲಸ ಮಾಡುವ ಸಮಯದಲ್ಲಿ ಬಿದ್ದು ಪೆಟ್ಟು ಮಾಡಿಕೊಂಡು ಆಸ್ಪತ್ರೆಗೆ ದಾಖಲಾದ ಸಮಯದಲ್ಲಿ ಪೋಲಿಸರು ಮೂರು ನಾಲ್ಕು ದಾಖಲೆಗಳಿಗೆ ಸಹಿ ಮಾಡಿಸಿಕೊಂಡಿರುತ್ತಾರೆ ಇದನ್ನು ಹೊರತುಪಡಿಸಿ ನನಗೆ ಇನ್ನ್ಯಾವುದೇ ವಿಷಯ ತಿಳಿದಿರುವುದಿಲ್ಲ. ನಿಪಿ-3 ಮತ್ತು 4 ನ್ನು ಎಲ್ಲಿ ತೆಗೆಯಲಾಗಿದೆ ಎಂದು ನನಗೆ ತಿಳಿದಿರುವುದಿಲ್ಲ. ಎಂ.ಒ.1 ರ ಮೇಲೆ ಯಾವ ಕಾರಣಕ್ಕೆ ಸಹಿ ಮಾಡಿರುತ್ತೇನೆ ಎಂದು ನನಗೆ ತಿಳಿದಿರುವುದಿಲ್ಲ. ಇದನ್ನು ಹೊರತುಪಡಿಸಿ ನನಗೆ ನನಗೆ ಇನ್ನ್ಯಾವುದೇ ವಿಷಯ ತಿಳಿದಿರುವುದಿಲ್ಲ.

(ಈ ಹಂತದಲ್ಲಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪ್ರಾಜ್ಞ್ಯಾಸ.ಅ.ಅ. ರವರು ಪಾಟೀ ಸವಾಲು ಮಾಡಲು ಅನುಮತಿ ಕೋರಿದ್ದು ಅನುಮತಿ ನೀಡಿದೆ)

**ಪಾಟೀ ಸವಾಲು: ಪ್ರಾಜ್ಞ್ಯಾಸ.ಸ.ಅ. ರವರಿಂದ:**

ದಿ.06.04.2024 ರಂದು ಚಾಸಾ-4 ರವರೊಂದಿಗೆ ನನ್ನ ಮನೆಯಲ್ಲಿ ಮಾತನಾಡುತ್ತ ಕುಳಿತಿರುವಾಗ ನನ್ನ ಅಳಿಯನಾದ ಆರೋಪಿಯು ಮನೆಗೆ ಬಂದು ನನ್ನ ಮಗಳಾದ ಚಾಸಾ-6 ರವರೊಟ್ಟಿಗೆ ಖರ್ಚಿಗೆ ಹಣ ಕೊಡು ಎಂದು ಗಲಾಟೆ ಮಾಡುತ್ತಿದ್ದು ಆಗ ನಾನು ಗಲಾಟೆ ಮಾಡಿ ಅವಾಚ್ಯ ಶಬ್ದಗಳಿಂದ ಬೈದು, ಹೊಡೆಯಲು ಹೋದಾಗ ನಾನು ಆರೋಪಿಯನ್ನು ಚಾಸಾ-6 ರವರೊಟ್ಟಿಗೆ ದಿನವೂ ಏತಕ್ಕಾಗಿ ಗಲಾಟೆ ಮಾಡುತ್ತೀಯ ಎಂದು ಕೇಳಲಾಗಿ ಆಗ ಆರೋಪಿಯು ನೀನು ಯಾರು ಇದನ್ನು ಕೇಳಲು ಎಂದು ತನ್ನ ಕೈಯನ್ನು ಮುಷ್ಟಿ ಮಾಡಿ ನನ್ನ ಬೆನ್ನಿಗೆ ಗುದ್ದಿರುತ್ತಾರೆ ಎಂದರೆ ಸರಿಯಲ್ಲ. ಆಗ ಚಾಸಾ-4 ಮತ್ತು 5 ರವರು ಜಗಳ ಬಿಡಿಸಿರುತ್ತಾರೆ ಎಂದರೆ ಸರಿಯಲ್ಲ. ಆಗ ಆರೋಪಿಯು ಮನೆಯಿಂದ ಹೊರಹೋಗಿ ಮರದ ಬಡಿಗೆಯನ್ನು ತಂದು ಅವಾಚ್ಯ ಶಬ್ದಗಳಿಂದ ಮಾತನಾಡುತ್ತಾ ಈಗ ಮಾತನಾಡು ಎಂದು ಕೈಯಲ್ಲಿದ್ದ ದೊಣ್ಣೆಯಿಂದ ನನ್ನ ಎಡಗೈ ನ ಮೊಣಕ್ಕೆ ಗೆ ಹೊಡೆದಿರುತ್ತಾನೆ ಎಂದರೆ ಸರಿಯಲ್ಲ. ಆಗ ನಾನು ಕೂಗಲಾಗಿ ಚಾಸಾ-5 ರವರು ಬಂದಾಗ ಅವರಿಗೂ ಸಹಾ ಎಡಭಾಗದ ಸೊಂಟಕ್ಕೆ ಹೊಡೆದಿರುತ್ತಾರೆ ಎಂದರೆ ಸರಿಯಲ್ಲ. ನಂತರ ನಾವೆಲ್ಲರೂ ಕೂಗಿಕೊಂಡಾಗ ಆರೋಪಿಯು ಕೈಯಲ್ಲಿದ್ದ ಬಡಿಗೆಯನ್ನು ಅಲ್ಲಿಯೇ ಎಸೆದು ಓಡಿ ಹೋಗಿರುತ್ತಾರೆ ಎಂದರೆ ಸರಿಯಲ್ಲ. ಸ್ವಲ್ಪ ಸಮಯದ ನಂತರ ಆರೋಪಿಯು ನಮ್ಮ ಮನೆಯ ಹತ್ತಿರ ನಿಂತು ಈಗ ಕೈ ಮುರಿದಿದ್ದೇನೆ ಮುಂದೆ ಒಂದು ದಿನ ಕೊಲೆ ಮಾಡುವುದಾಗಿ ಬೆದರಿಕೆ ಹಾಕಿರುತ್ತಾರೆ ಎಂದರೆ ಸರಿಯಲ್ಲ. ನಂತರ ನಾನು ದಿ.07.04.2024 ರಂದು ಬೆಳಗ್ಗೆ ಮೂಡಿಗೆರೆ ಆಸ್ಪತ್ರೆಗೆ ತೆರಳಿ ಚಿಕಿತ್ಸೆಗೆ ದಾಖಲಾಗಿದ್ದ ಸಮಯದಲ್ಲಿ ಚಾಸಾ-6 ರವರೊಂದಿಗೆ ಚರ್ಚಿಸಿ ಆರೋಪಿಯ ವಿರುದ್ಧ ದಿ.10.04.2024 ರಂದು ದೂರನ್ನು ದಾಖಲಿಸಿರುತ್ತೇನೆ ಎಂದರೆ ಸರಿಯಲ್ಲ.

ನಂತರ ದಿ.01.05.2024 ರಂದು ಬೆ.9.00 ರಿಂದ 10.00 ರ ಸಮಯದಲ್ಲಿ ಪೋಲಿಸರು ಗಲಾಟೆಯಾದ ಸ್ಥಳಕ್ಕೆ ಬಂದಾಗ ನಾನು ಕೃತ್ಯ ನಡೆದ ಸ್ಥಳವನ್ನು ತೋರಿಸಿದ ಮೇರೆಗೆ ಪೋಲಿಸರಿಗೆ ಅಕೇಶಿಯ ಮರದ ಒಂದು ದೊಣ್ಣೆಯನ್ನು ನಾನೇ ನೀಡಿರುತ್ತೇನೆ ಎಂದರೆ ಸರಿಯಲ್ಲ. ಸದರಿ ದೊಣ್ಣೆಯಿಂದ ಆರೋಪಿಯು ಹಲ್ಲೆ ಮಾಡಿರುವುದಾಗಿ ನುಡಿದು ನೀಡಿರುತ್ತೇನೆ ಎಂದರೆ ಸರಿಯಲ್ಲ. ಸದರಿ ಸಮಯದಲ್ಲಿ ನಿಪಿ-2 ಕ್ಕೆ ಸಹಿ ಮಾಡಿರುತ್ತೇನೆ ಎಂದರೆ ಸರಿಯಲ್ಲ. ಸದರಿ ಸಮಯದಲ್ಲಿ ನಿಪಿ-3 ಮತ್ತು 4 ರಂತೆ ಫೋಟೋವನ್ನು ತೆಗೆದಿರುತ್ತಾರೆ ಎಂದರೆ ಸರಿಯಲ್ಲ.

ನನಗೆ ಪ್ರಕರಣದ ಬಗ್ಗೆ ಸಂಪೂರ್ಣ ಮಾಹಿತಿ ತಿಳಿದಿದ್ದರೂ ಸಹಾ ಆರೋಪಿ ನನ್ನ ಅಳಿಯನಾದ ಆದ ಕಾರಣ ಅವರಿಗೆ ಶಿಕ್ಷೆಯಾಗುತ್ತದೆ ಎಂದು ಹಾಗೂ ಅವರಿಗೆ ಸಹಾಯ ಮಾಡುವ ಉದ್ದೇಶದಿಂದ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀ ಸವಾಲು: ಆರೋಪಿ ಪರ ವಕೀಲರು ಇಲ್ಲ ಎಂದು ತಿಳಿಸಿರುತ್ತಾರೆ.**

**ಮರು ವಿಚಾರಣೆ ಇಲ್ಲ**

(ತೆರೆದ ನ್ಯಾಯಾಲಯದಲ್ಲಿ ನನ್ನ  ಉಕ್ತಲೇಖನದಂತೆ ಬೆರಳಚ್ಚು ಮಾಡಿ ಮುದ್ರಿಸಲಾಯಿತು)

ಓ ಹೇ ಕೇ ಸ ಇ ಎ ಒ.,

ಸಹಿ/-

ಸಾಕ್ಷಿ ಸಹಿಃ

1 ನೇ ಹೆಚ್ಚುವರಿ ಸಿವಿಲ್  ನ್ಯಾಯಾಧೀಶರು
ಮತ್ತು ಪ್ರದನ್ಯಾದಂ., ಮೂಡಿಗೆರೆ.

**1 ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ.ದಂಃ ರವರ ನ್ಯಾಯಾಲಯ, ಮೂಡಿಗೆರೆ**
**ಸಿ.ಸಿ.1506/2024**

| | | |
|---|---|---|
| ಸಾಕ್ಷಿದಾರರ ಹೆಸರು | : ಸುಶೀಲ | ಪ್ರಾಸಾ-2 |
| ಗಂಡನ ಹೆಸರು | : ಅಣ್ಣಪ್ಪ | ಚಾಸಾ-5 |
| ವಯಸ್ಸು | : 50 ವರ್ಷ | ಪ್ರಮಾಣ ವಚನ ಬೋಧಿಸಲಾದ |
| ಉದ್ಯೋಗ | : ಕೂಲಿ | ದಿನಾಂಕಃ 06.01.2026. |
| ವಾಸಸ್ಥಳ | : ಬಿ.ಹೊಸಹಳ್ಳಿ | |

**:ಮುಖ್ಯ ವಿಚಾರಣೆ ಪ್ರಾಙ್ಞ್ಯಾ ಸ.ಸ.ಅ. ರವರಿಂದ:**

ನ್ಯಾಯಾಲಯದ ಮುಂದಿರುವ ಆರೋಪಿ ನನ್ನ ಅಳಿಯ. ಚಾಸಾ-1 ನನ್ನ ಗಂಡ. ಚಾಸಾ-6 ನನ್ನ ಮಗಳು. ಚಾಸಾ-2 ರಿಂದ 4 ರವರ ಪರಿಚಯ ನನಗಿದೆ.

ನಾನು ಯಾವುದೇ ಘಟನೆಯ ಪ್ರತ್ಯಕ್ಷ ದರ್ಶಿಯಾಗಿರುವುದಿಲ್ಲ. ನಾನು ಹೊಲದಲ್ಲಿ ಕೂಲಿ ಕೆಲಸ ಮಾಡುವ ಸಮಯದಲ್ಲಿ ಬಿದ್ದು ಪೆಟ್ಟು ಮಾಡಿಕೊಂಡು ಆಸ್ಪತ್ರೆಗೆ ದಾಖಲಾದ ಸಮಯದಲ್ಲಿ ಪೋಲಿಸರು ನನ್ನ ಹೇಳಿಕೆಯನ್ನು ಪಡೆದುಕೊಂಡಿರುತ್ತಾರೆ. ಇದನ್ನು ಹೊರತುಪಡಿಸಿ ನನಗೆ ಇನ್ಯಾವುದೇ ವಿಷಯ ತಿಳಿದಿರುವುದಿಲ್ಲ.

(ಈ ಹಂತದಲ್ಲಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪ್ರಾಙ್ಞ್ಯಾಸ.ಅ.ಅ. ರವರು ಪಾಟೀ ಸವಾಲು ಮಾಡಲು ಅನುಮತಿ ಕೋರಿದ್ದು ಅನುಮತಿ ನೀಡಿದೆ)

**ಪಾಟೀ ಸವಾಲು: ಪ್ರಾಙ್ಞ್ಯಾಸ.ಸ.ಅ. ರವರಿಂದ:**

ದಿ.06.04.2024 ರಂದು ಚಾಸಾ-1 ಮತ್ತು ಚಾಸಾ-4 ರವರೊಂದಿಗೆ ನನ್ನ ಮನೆಯಲ್ಲಿ ಮಾತನಾಡುತ್ತ ಕುಳಿತಿರುವಾಗ ರಾ.9.30 ರ ಸಮಯದಲ್ಲಿ ನನ್ನ ಅಳಿಯನಾದ ಆರೋಪಿಯು ಮನೆಗೆ ಬಂದು ನನ್ನ ಮಗಳಾದ ಚಾಸಾ-6 ರವರೊಟ್ಟಿಗೆ ಖರ್ಚಿಗೆ ಹಣ ಕೊಡು ಎಂದು ಗಲಾಟೆ ಮಾಡುತ್ತಿದ್ದು ಸದರಿ ಸಮಯದಲ್ಲಿ ಆರೋಪಿಯು ಗಲಾಟೆ ಮಾಡಿ ಅವಾಚ್ಯ ಶಬ್ದಗಳಿಂದ ಬೈದು, ಹೊಡೆಯಲು ಹೋದಾಗ ಚಾಸಾ-1 ರವರು ಆರೋಪಿಯನ್ನು ಚಾಸಾ-6 ರವರೊಟ್ಟಿಗೆ ದಿನವೂ ಏತಕ್ಕಾಗಿ ಗಲಾಟೆ ಮಾಡುತ್ತೀಯ ಎಂದು ಕೇಳಲಾಗಿ ಆಗ ಆರೋಪಿಯು ಚಾಸಾ-1 ರವರನ್ನು ನೀನು ಯಾರು ಇದನ್ನು ಕೇಳಲು ಎಂದು ತನ್ನ ಕೈಯನ್ನು ಮುಷ್ಟಿ ಮಾಡಿ ಚಾಸಾ-1 ರವರ ಬೆನ್ನಿಗೆ ಗುದ್ದಿರುತ್ತಾರೆ ಎಂದರೆ ಸರಿಯಲ್ಲ. ಆಗ ನಾನು ಮತ್ತು ಚಾಸಾ-6 ರವರು ಜಗಳ ಬಿಡಿಸಿರುತ್ತಾರೆ ಎಂದರೆ ಸರಿಯಲ್ಲ. ಆಗ ಆರೋಪಿಯು ಮನೆಯಿಂದ ಹೊರಹೋಗಿ ಮರದ ಬಡಿಗೆಯನ್ನು ತಂದು ಅವಾಚ್ಯ ಶಬ್ದಗಳಿಂದ ಮಾತನಾಡುತ್ತಾ ಈಗ ಮಾತನಾಡು ಎಂದು ಕೈಯಲ್ಲಿದ್ದ ದೊಣ್ಣೆಯಿಂದ ಚಾಸಾ-1 ರವರಿಗೆ ಎಡಗೈ ನ ಮೊಣಕ್ಕೆ ಗೆ ಹೊಡೆದಿರುತ್ತಾನೆ ಎಂದರೆ ಸರಿಯಲ್ಲ. ಆಗ ಚಾಸಾ-1 ರವರು ಕೂಗಲಾಗಿ ನಾನು ಬಂದಾಗ ನನಗೂ ಸಹಾ ಎಡಭಾಗದ ಸೊಂಟಕ್ಕೆ ಹೊಡೆದಿರುತ್ತಾರೆ

ಎಂದರೆ ಸರಿಯಲ್ಲ. ನಂತರ ನಾವೆಲ್ಲರೂ ಕೂಗಿಕೊಂಡಾಗ ಆರೋಪಿಯು ಕೈಯಲ್ಲಿದ್ದ ಬಡಿಗೆಯನ್ನು ಅಲ್ಲಿಯೇ ಎಸೆದು ಓಡಿ ಹೋಗಿರುತ್ತಾರೆ ಎಂದರೆ ಸರಿಯಲ್ಲ. ಸ್ವಲ್ಪ ಸಮಯದ ನಂತರ ಆರೋಪಿಯು ನಮ್ಮ ಮನೆಯ ಹತ್ತಿರ ನಿಂತು ಈಗ ಕೈ ಮುರಿದಿದ್ದೇನೆ ಮುಂದೆ ಒಂದು ದಿನ ಕೊಲೆ ಮಾಡುವುದಾಗಿ ಬೆದರಿಕೆ ಹಾಕಿರುತ್ತಾರೆ ಎಂದರೆ ಸರಿಯಲ್ಲ. ನಂತರ ಚಾಸಾ-1, 6 ಮತ್ತು ನಾನು ದಿ.07.04.2024 ರಂದು ಬೆಳಗ್ಗೆ ಮೂಡಿಗೆರೆ ಆಸ್ಪತ್ರೆಗೆ ತೆರಳಿ ಚಿಕಿತ್ಸೆಗೆ ದಾಖಲಾಗಿದ್ದ ಸಮಯದಲ್ಲಿ ಚಾಸಾ-6 ರವರೊಂದಿಗೆ ಚಾಸಾ-1 ರವರು ಚರ್ಚಿಸಿ ಆರೋಪಿಯ ವಿರುದ್ಧ ದಿ.10.04.2024 ರಂದು ದೂರನ್ನು ದಾಖಲಿಸಿರುತ್ತೇವೆ ಎಂದರೆ ಸರಿಯಲ್ಲ.

ನಂತರ ದಿ.01.05.2024 ರಂದು ನಾನು ಪೋಲಿಸರಿಗೆ ಹೇಳಿಕೆ ನೀಡಿರುತ್ತೇನೆ ಎಂದರೆ ಸರಿಯಲ್ಲ. ಸಾಕ್ಷಿಯು ಸದರಿ ಹೇಳಿಕೆಯ ಭಾಗವನ್ನು ಸಂಪೂರ್ಣವಾಗಿ ಓದಿ ತಿಳಿಸಿದ್ದು, ಸಾಕ್ಷಿಯು ಸಂಪೂರ್ಣವಾಗಿ ಅಲ್ಲಗಳೆದ ಕಾರಣ ಸದರಿ ಹೇಳಿಕೆಯ ಭಾಗವನ್ನು ನಿಪಿ-5 ಎಂದು ಗುರುತಿಸಲಾಯಿತು.

ನನಗೆ ಪ್ರಕರಣದ ಬಗ್ಗೆ ಸಂಪೂರ್ಣ ಮಾಹಿತಿ ತಿಳಿದಿದ್ದರೂ ಸಹಾ ಆರೋಪಿ ನನ್ನ ಅಳಿಯನಾದ ಆದ ಕಾರಣ ಅವರಿಗೆ ಶಿಕ್ಷೆಯಾಗುತ್ತದೆ ಎಂದು ಹಾಗೂ ಅವರಿಗೆ ಸಹಾಯ ಮಾಡುವ ಉದ್ದೇಶದಿಂದ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀ ಸವಾಲು: ಆರೋಪಿ ಪರ ವಕೀಲರು ಇಲ್ಲ ಎಂದು ತಿಳಿಸಿರುತ್ತಾರೆ.**
**ಮರು ವಿಚಾರಣೆ ಇಲ್ಲ**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಿ ಮುದ್ರಿಸಲಾಯಿತು)

ಓ ಹೇ ಕೇ ಸ ಇ ಎ ಒ.,

ಸಹಿ/-

ಸಾಕ್ಷಿ ಸಹಿಃ

1 ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು
ಮತ್ತು ಪ್ರದನ್ಯಾದಂ., ಮೂಡಿಗೆರೆ.

**1 ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ.ದಂಃ ರವರ ನ್ಯಾಯಾಲಯ, ಮೂಡಿಗೆರೆ**
**ಸಿ.ಸಿ.1506/2024**

| | | |
|---|---|---|
| ಸಾಕ್ಷಿದಾರರ ಹೆಸರು | : ಸುನಿತ | ಪ್ರಾಸಾ-3 |
| ಗಂಡನ ಹೆಸರು | : ಅನಿಲ್ | ಚಾಸಾ-6 |
| ವಯಸ್ಸು | : 35 ವರ್ಷ | ಪ್ರಮಾಣ ವಚನ ಬೋಧಿಸಲಾದ |
| ಉದ್ಯೋಗ | : ಕೂಲಿ | ದಿನಾಂಕಃ 06.01.2026. |
| ವಾಸಸ್ಥಳ | : ಬಿ.ಹೊಸಹಳ್ಳಿ | |

**:ಮುಖ್ಯ ವಿಚಾರಣೆ ಪ್ರಾಜ್ಞ್ಯಾ ಸ.ಸ.ಅ. ರವರಿಂದ:**

ನ್ಯಾಯಾಲಯದ ಮುಂದಿರುವ ಆರೋಪಿ ನನ್ನ ಗಂಡ. ಚಾಸಾ-1 ನನ್ನ ತಂದೆ. ಚಾಸಾ-5 ನನ್ನ ತಾಯಿ. ಚಾಸಾ-2 ರಿಂದ 4 ರವರ ಪರಿಚಯ ನನಗಿದೆ.

ನಾನು ಯಾವುದೇ ಘಟನೆಯ ಪ್ರತ್ಯಕ್ಷ ದರ್ಶಿಯಾಗಿರುವುದಿಲ್ಲ. ನಾನು ಹೊಲದಲ್ಲಿ ಕೂಲಿ ಕೆಲಸ ಮಾಡುವ ಸಮಯದಲ್ಲಿ ಬಿದ್ದು ಪೆಟ್ಟು ಮಾಡಿಕೊಂಡು ಆಸ್ಪತ್ರೆಗೆ ದಾಖಲಾದ ಸಮಯದಲ್ಲಿ ಪೋಲಿಸರು ನನ್ನ ಹೇಳಿಕೆಯನ್ನು ಪಡೆದುಕೊಂಡಿರುತ್ತಾರೆ. ಇದನ್ನು ಹೊರತುಪಡಿಸಿ ನನಗೆ ಇನ್ಯಾವುದೇ ವಿಷಯ ತಿಳಿದಿರುವುದಿಲ್ಲ.

(ಈ ಹಂತದಲ್ಲಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪ್ರಾಜ್ಞ್ಯಾಸ.ಅ.ಅ. ರವರು ಪಾಟೀ ಸವಾಲು ಮಾಡಲು ಅನುಮತಿ ಕೋರಿದ್ದು ಅನುಮತಿ ನೀಡಿದೆ)

**ಪಾಟೀ ಸವಾಲು: ಪ್ರಾಜ್ಞ್ಯಾಸ.ಸ.ಅ. ರವರಿಂದ:**

ದಿ.06.04.2024 ರಂದು ಚಾಸಾ-1 ಮತ್ತು ಚಾಸಾ-4 ರವರೊಂದಿಗೆ ನಮ್ಮ ಮನೆಯಲ್ಲಿ ಮಾತನಾಡುತ್ತ ಕುಳಿತಿರುವಾಗ ರಾ.9.30 ರ ಸಮಯದಲ್ಲಿ ನನ್ನ ಗಂಡನಾದ ಆರೋಪಿಯು ಮನೆಗೆ ಬಂದು ನನ್ನನ್ನು ಖರ್ಚಿಗೆ ಹಣ ಕೊಡು ಎಂದು ಗಲಾಟೆ ಮಾಡುತ್ತಿದ್ದು ಸದರಿ ಸಮಯದಲ್ಲಿ ಆರೋಪಿಯು ಗಲಾಟೆ ಮಾಡಿ ಅವಾಚ್ಯ ಶಬ್ದಗಳಿಂದ ಬೈದು, ಹೊಡೆಯಲು ಬಂದಾಗ ಚಾಸಾ-1 ರವರು ಆರೋಪಿಯನ್ನು ನನ್ನೊಟ್ಟಿಗೆ ದಿನವೂ ಏತಕ್ಕಾಗಿ ಗಲಾಟೆ ಮಾಡುತ್ತೀಯ ಎಂದು ಕೇಳಲಾಗಿ ಆಗ ಆರೋಪಿಯು ಚಾಸಾ-1 ರವರನ್ನು ನೀನು ಯಾರು ಇದನ್ನು ಕೇಳಲು ಎಂದು ತನ್ನ ಕೈಯನ್ನು ಮುಷ್ಟಿ ಮಾಡಿ ಚಾಸಾ-1 ರವರ ಬೆನ್ನಿಗೆ ಗುದ್ದಿರುತ್ತಾರೆ ಎಂದರೆ ಸರಿಯಲ್ಲ. ಆಗ ಚಾಸಾ-5 ಮತ್ತು ನಾನು ರವರು ಜಗಳ ಬಿಡಿಸಿರುತ್ತೇವೆ ಎಂದರೆ ಸರಿಯಲ್ಲ. ಆಗ ಆರೋಪಿಯು ಮನೆಯಿಂದ ಹೊರಹೋಗಿ ಮರದ ಬಡಿಗೆಯನ್ನು ತಂದು ಅವಾಚ್ಯ ಶಬ್ದಗಳಿಂದ ಮಾತನಾಡುತ್ತಾ ಈಗ ಮಾತನಾಡು ಎಂದು ಕೈಯಲ್ಲಿದ್ದ ದೊಣ್ಣೆಯಿಂದ ಚಾಸಾ-1 ರವರಿಗೆ ಎಡಗೈ ನ ಮೊಣಕ್ಕೆ ಗೆ ಹೊಡೆದಿರುತ್ತಾನೆ ಎಂದರೆ ಸರಿಯಲ್ಲ. ಆಗ ಚಾಸಾ-1 ರವರು ಕೂಗಲಾಗಿ ಚಾಸಾ-5 ರವರು ಬಂದಾಗ ಚಾಸಾ-5 ರವರಿಗೂ ಸಹಾ ಎಡಭಾಗದ ಸೊಂಟಕ್ಕೆ ಹೊಡೆದಿರುತ್ತಾರೆ ಎಂದರೆ ಸರಿಯಲ್ಲ.

ನಂತರ ನಾವೆಲ್ಲರೂ ಕೂಗಿಕೊಂಡಾಗ ಆರೋಪಿಯು ಕೈಯಲ್ಲಿದ್ದ ಬಡಿಗೆಯನ್ನು ಅಲ್ಲಿಯೇ ಎಸೆದು ಓಡಿ ಹೋಗಿರುತ್ತಾರೆ ಎಂದರೆ ಸರಿಯಲ್ಲ. ಸ್ವಲ್ಪ ಸಮಯದ ನಂತರ ಆರೋಪಿಯು ನಮ್ಮ ಮನೆಯ ಹತ್ತಿರ ನಿಂತು ಈಗ ಕೈ ಮುರಿದಿದ್ದೇನೆ ಮುಂದೆ ಒಂದು ದಿನ ಕೊಲೆ ಮಾಡುವುದಾಗಿ ಬೆದರಿಕೆ ಹಾಕಿರುತ್ತಾರೆ ಎಂದರೆ ಸರಿಯಲ್ಲ. ನಂತರ ಚಾಸಾ-1, 5 ಮತ್ತು ನಾನು ದಿ.07.04.2024 ರಂದು ಬೆಳಗ್ಗೆ ಮೂಡಿಗೆರೆ ಆಸ್ಪತ್ರೆಗೆ ತೆರಳಿ ಚಿಕಿತ್ಸೆಗೆ ದಾಖಲಾಗಿದ್ದ ಸಮಯದಲ್ಲಿ ನನ್ನೊಟ್ಟಿಗೆ ಚಾಸಾ-1 ರವರು ಚರ್ಚಿಸಿ ಆರೋಪಿಯ ವಿರುದ್ಧ ದಿ.10.04.2024 ರಂದು ದೂರನ್ನು ದಾಖಲಿಸಿರುತ್ತೇವೆ ಎಂದರೆ ಸರಿಯಲ್ಲ.

ನಂತರ ದಿ.01.05.2024 ರಂದು ನಾನು ಪೋಲಿಸರಿಗೆ ಹೇಳಿಕೆ ನೀಡಿರುತ್ತೇನೆ ಎಂದರೆ ಸರಿಯಲ್ಲ. ಸಾಕ್ಷಿಯು ಸದರಿ ಹೇಳಿಕೆಯ ಭಾಗವನ್ನು ಸಂಪೂರ್ಣವಾಗಿ ಓದಿ ತಿಳಿಸಿದ್ದು, ಸಾಕ್ಷಿಯು ಸಂಪೂರ್ಣವಾಗಿ ಅಲ್ಲಗಳೆದ ಕಾರಣ ಸದರಿ ಹೇಳಿಕೆಯ ಭಾಗವನ್ನು ನಿಪಿ-6 ಎಂದು ಗುರುತಿಸಲಾಯಿತು.

ನನಗೆ ಪ್ರಕರಣದ ಬಗ್ಗೆ ಸಂಪೂರ್ಣ ಮಾಹಿತಿ ತಿಳಿದಿದ್ದರೂ ಸಹಾ ಆರೋಪಿ ನನ್ನ ಗಂಡನಾದ ಕಾರಣ ಅವರಿಗೆ ಶಿಕ್ಷೆಯಾಗುತ್ತದೆ ಎಂದು ಹಾಗೂ ಅವರಿಗೆ ಸಹಾಯ ಮಾಡುವ ಉದ್ದೇಶದಿಂದ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀ ಸವಾಲು: ಆರೋಪಿ ಪರ ವಕೀಲರು ಇಲ್ಲ ಎಂದು ತಿಳಿಸಿರುತ್ತಾರೆ.**
**ಮರು ವಿಚಾರಣೆ ಇಲ್ಲ**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಿ ಮುದ್ರಿಸಲಾಯಿತು)

ಓ ಹೇ ಕೇ ಸ ಇ ಎ ಒ.,

ಸಹಿ/-

ಸಾಕ್ಷಿ ಸಹಿಃ

1 ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು
ಮತ್ತು ಪ್ರದನ್ಯಾದಂ., ಮೂಡಿಗೆರೆ.